**ಸಿ.ಸಿ.462/2010**

**ಸಿ.ಸಿ.65/2011**

***ಪ್ರಾಸಾಃ 9***

***ಚಾಸಾಃ 13***

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ. ದಂ. ನ್ಯಾಯಾಲಯ, ಬಳ್ಳಾರಿ.**

| | |
|---|---|
| ***ಹೆಸರು*** | ಶ್ರೀ ಅನ್ವರ್ |
| ***ತಂದೆಯ ಹೆಸರು*** | ಶ್ರೀ ಬಾಷು |
| ***ವಯಸ್ಸು*** | 48 ವರ್ಷ |
| ***ವೃತ್ತಿ*** | ವ್ಯಾಪಾರ |
| ***ವಿಳಾಸ*** | ಬಳ್ಳಾರಿ |

**ದಿನಾಂಕಃ 15-07-2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿಯವರಿಂದ**

1. ಚಾಸಾಃ 1 ರವರ ಪರಿಚಯವಿರುತ್ತದೆ. ಆರೋಪಿಯ ಪರಿಚಯವಿರುವುದಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ. ನಾನು ಪೋಲಿಸರಿಗೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

***(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಕೋರಿರುತ್ತಾರೆ. ಅಭಿಯೋಜನ ಪ್ರಕರಣಕ್ಕೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿದ ಕಾರಣ ಮಾನ್ಯ ಎಪಿಪಿ ಯವರ ಕೋರಿಕೆಯನ್ನು ಪರಿಗಣಿಸಿ ಪಾಟಿ ಸವಾಲಿಗೆ ಅವಕಾಶ ನೀಡಲಾಯಿತು.)***

**ಪಾಟಿ ಸವಾಲುಃ ಮಾನ್ಯ ಎಪಿಪಿ ಯವರಿಂದ**

2. ಚಾಸಾಃ 1 ರವರು ಆರೋಪಿಯ ಜೊತೆ 2007 ರಲ್ಲಿ ಮದುವೆ ಮಾಡಿಕೊಟ್ಟಿರುತ್ತಾರೆಂದರೆ ನನಗೆ ಗೊತ್ತಿಲ್ಲ. ಮದುವೆಯ ಸಮಯದಲ್ಲಿ ಆರೋಪಿತರಿಗೆ ವರದಕ್ಷಿಣೆ ನೀಡೀರುತ್ತಾರೆಂದರೆ ನನಗೆ ಗೊತ್ತಿಲ್ಲ. ಆರೋಪಿತರು ಚಾಸಾಃ 1 ರವರಿಗೆ ಹೆಚ್ಚಿನ ವರದಕ್ಷಿಣೆ ಸಲುವಾಗಿ ಕಿರುಕುಳ ನೀಡುತ್ತಿದ್ದರು ಎಂದರೆ ಸರಿಯಲ್ಲ. ಆರೋಪಿತನು ತಬಸ್ಸುಮ್‌ಳನ್ನು ಮದುವೆಯಾಗಿರುತ್ತಾನೆ. ಈ ಸಂಬಂಧವನ್ನು ಒಪ್ಪಿಕೊಳ್ಳು ಎಂದು ಹೇಳಿರುತ್ತಾರೆಂದರೆ ಸರಿಯಲ್ಲ. ಆರೋಪಿತರು ಚಾಸಾಃ 1

ರವರಿಗೆ ಜೀವದ ಬೆದರಿಕೆ ಹಾಕಿರುತ್ತಾರೆಂದರೆ ಸರಿಯಲ್ಲ. ಈ ಸಂಬಂಧವಾಗಿ ಪಂಚಾಯಿತಿ ಜರುಗಿದ್ದು, ಆ ಸಮಯದಲ್ಲಿ ನಾನು ಮತ್ತು ಚಾಸಾಃ 1 ರವರ ಸಂಬಂಧಿಕರು ಸೇರಿ ಆರೋಪಿತರಿಗೆ ಹೇಳಿದ್ದೆವು ಎಂದರೆ ಸರಿಯಲ್ಲ. ಆ ಸಮಯದಲ್ಲಿ ಆರೋಪಿತರು ತಬಸ್ಸುಮ್‌ರವರು ಚಾಸಾಃ 1 ರವರ ಕೈಯಲ್ಲಿದ್ದ ಮಗುವನ್ನು ಕಿತ್ತುಕೊಳ್ಳಲು ಪ್ರಯತ್ನಪಟ್ಟಿರುತ್ತಾರೆಂದರೆ ಸರಿಯಲ್ಲ. ಆರೋಪಿತರು ಚಾಸಾಃ 1 ರವರಿಗೆ ಅವಾಚ್ಯ ಶಬ್ದಗಳಿಂದ ಬೈದಿರುತ್ತಾರೆಂದರೆ ಸರಿಯಲ್ಲ. ಆರೋಪಿತರಿಗೆ ಬುದ್ಧಿವಾದ ಹೇಳಿದ್ದರೂ ಅವರು ಕೇಳಲಿಲ್ಲ ಎಂದರೆ ಸರಿಯಲ್ಲ. ಆರೋಪಿತರು ಚಾಸಾಃ 1 ರವರಿಗೆ ಮಾನಸಿಕ ಮತ್ತು ದೈಹಿಕವಾಗಿ ಕಿರುಕುಳ ನೀಡುತ್ತಿದ್ದರು ಎಂದರೆ ಸರಿಯಲ್ಲ. ಈಗ ಓದಿ ಹೇಳಿದಂತೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಈಗ ಅಲ್ಲಗಳೆದ ಹೇಳಿಕೆಯನ್ನು ನಿಪಿಃ 12 ಎಂದು ಗುರುತಿಸಲಾಯಿತು.

**ಪಾಟಿ ಸವಾಲುಃ ಆರೋಪಿ ಪರ ಮಾನ್ಯ ವಕೀಲರು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸರಿ ಇದೆ.**

**ಪ್ರಧಾನ ಪ್ರ.ದ.ನ್ಯಾ.ದಂ. ಬಳ್ಳಾರಿ.**